ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಧ್ಯಕ್ಷರುಗಳು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 04/03/2020

## ಪತ್ರಕರ್ತರ ನಿರ್ಬಂಧ ತೆರವಿಗೆ ಸ್ಪೀಕರ್ ನಕಾರ

**ಬೆಂಗಳೂರು:** ಶಾಸಕರ ಭವನಕ್ಕೆ ಪತ್ರಕರ್ತರ ಪ್ರವೇಶ ನಿರ್ಬಂಧಿಸಿರುವುದನ್ನು ಕೂಡಲೇ ತೆರವು ಮಾಡುವಂತೆ ಮುಖ್ಯಮಂತ್ರಿ ಮಾಡಿದ ಮನವಿಗೂ ಸ್ಪೀಕರ್ ಮನ್ನಣೆ ನೀಡಿಲ್ಲ. ಶಾಸಕರ ಭವನಕ್ಕೆ ಪತ್ರಕರ್ತರನ್ನು ನಿರ್ಬಂಧಿಸಿರುವ ವಿಷಯವನ್ನು ಪತ್ರಕರ್ತರು ಸಿಎಂ ಗಮನಕ್ಕೆ ತಂದಾಗ ಪ್ರತಿಕ್ರಿಯಿಸಿದ್ದ ಸಿಎಂ, ತಕ್ಷಣವೇ ನಿರ್ಬಂಧ ತೆರವು ಮಾಡುವಂತೆ ಸ್ಪೀಕರ್‌ಗೆ ತಿಳಿಸುವುದಾಗಿ ಹೇಳಿದ್ದರು. ತಮ್ಮ ರಾಜಕೀಯ ಕಾರ್ಯದರ್ಶಿ ಎಸ್.ಆರ್. ವಿಶ್ವನಾಥ್ ಅವರನ್ನು ಸ್ಪೀಕರ್ ಬಳಿಗೆ ಕಳುಹಿಸಿದ್ದರು. ಆದರೆ, ಸಿಎಂ ಅವರ ಮಾತಿಗೆ ವಿಶ್ವೇಶ್ವರ ಹೆಗಡೆ ಕಾಗೇರಿ ಕಿಮ್ಮತ್ತು ನೀಡಿಲ್ಲ ಎಂದು ಮೂಲಗಳು ತಿಳಿಸಿವೆ.